# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

ಮುಕ್ತಗಂಗೋತ್ರಿ, ಮೈಸೂರು – 570 006

ಆಡಳಿತ ವಿಭಾಗ

---

## ಕಚೇರಿ ಆದೇಶ

ವಿಷಯ: ಆಂತರಿಕ ಗುಣಮಟ್ಟದ ಭರವಸೆ ಕೇಂದ್ರ (CIQA) ನಿರ್ದೇಶಕರನ್ನು ನೇಮಕ ಮಾಡುವ ಕುರಿತು.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ: KSOU/RPA/17-18 Dtd: 16.08.2017

2. ಕಚೇರಿ ಆದೇಶ ಸಂಖ್ಯೆ: ಕರಾಮುವಿ/ಆವಿ/ಸಿಬ್ಬಂದಿ-1/598/2019-20 ದಿನಾಂಕ: 01.08.2019.

3. ಡಾ. ಜಗದೀಶ್, ಪ್ರಾಧ್ಯಾಪಕರು(ನಿವೃತ್ತ), ಇವರ ರಾಜೀನಾಮೆ ದಿನಾಂಕ: 02.11.2019

4. ಮಾನ್ಯ ಕುಲಪತಿಗಳ ಆದೇಶ ದಿನಾಂಕ: 07.11.2019.

********

<u>ಪ್ರಸ್ತಾವನೆ:</u>

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು UGC (Open and Distance Learning) Guidelines-2017 ರನ್ವಯ ಕಾರ್ಯನಿರ್ವಹಿಸುತ್ತಿದ್ದು, ಸದರಿ ಮಾರ್ಗಸೂಚಿಯಲ್ಲಿ ದೂರ ಶಿಕ್ಷಣದ ಪದ್ಧತಿಯಲ್ಲಿ ಉನ್ನತ ಶಿಕ್ಷಣ ನೀಡುವ ಪ್ರತೀ ವಿಶ್ವವಿದ್ಯಾನಿಲಯವು / ಸಂಸ್ಥೆಗಳು ಶಿಕ್ಷಣದ ಗುಣಮಟ್ಟವನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಆಂತರಿಕ ಗುಣಮಟ್ಟದ ಭರವಸೆ (CIQA) ಕೇಂದ್ರವನ್ನು ಉಲ್ಲೇಖ-1ರ ಅಧಿಸೂಚನೆಯಲ್ಲಿ ಸ್ಥಾಪಿಸಿದ್ದು, ಈ ಕೇಂದ್ರದ ನಿರ್ವಹಣೆಯನ್ನು ಡಾ. ಜಗದೀಶ, ಪ್ರಾಧ್ಯಾಪಕರು, ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗ, ಇವರನ್ನು ನಿರ್ದೇಶಕರಾಗಿ ದಿನಾಂಕ: 16.08.2017 ರಲ್ಲಿ ನೇಮಕ ಮಾಡಲಾಗಿತ್ತು.

ಡಾ. ಜಗದೀಶರವರು ವಯೋ ನಿವೃತ್ತಿ ಆಧಾರದ ಮೇಲೆ ವಿಶ್ವವಿದ್ಯಾನಿಲಯದ ಸೇವೆಯಿಂದ ನಿವೃತ್ತಿ ಹೊಂದಿದ್ದ ಹಿನ್ನೆಲೆಯಲ್ಲಿ ದೂರ ಶಿಕ್ಷಣ ಪದ್ಧತಿಯಲ್ಲಿ ಪರಿಣಿತಿ ಹೊಂದಿರುವ ಡಾ. ಜಗದೀಶರವರನ್ನೇ CIQA ಕೇಂದ್ರದ ನಿರ್ದೇಶಕರನ್ನಾಗಿ ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೆ ಉಲ್ಲೇಖ-2ರ ಆದೇಶದಲ್ಲಿ ನೇಮಕ ಮಾಡಲಾಗಿತ್ತು.

ಡಾ. ಜಗದೀಶರವರು ತಮ್ಮ ವೈಯಕ್ತಿಕ ಕಾರಣಗಳಿಂದಾಗಿ CIQA ಕೇಂದ್ರದ ನಿರ್ದೇಶಕರ ಸ್ಥಾನಕ್ಕೆ ದಿನಾಂಕ:02.11.2019ರಂದು ರಾಜೀನಾಮೆ ಸಲ್ಲಿಸಿದ್ದು, ಡಾ. ಎಸ್. ನಿರಂಜನ್ ರಾಜ್, ಸಹಾಯಕ ಪ್ರಾಧ್ಯಾಪಕರು, ಮೈಕ್ರೋಬಯಾಲಜಿ ಅಧ್ಯಯನ ವಿಭಾಗ, ಇವರನ್ನು CIQA ಕೇಂದ್ರದ ನಿರ್ದೇಶಕರನ್ನಾಗಿ ಮುಂದಿನ ಆದೇಶದವರೆಗೆ ನೇಮಕ ಮಾಡಲು ಮಾನ್ಯ ಕುಲಪತಿಗಳು ಅನುಮೋದನೆ ನೀಡಿರುವ ಹಿನ್ನೆಲೆಯಲ್ಲಿ ಈ ಆದೇಶವನ್ನು ಹೊರಡಿಸಲಾಗಿದೆ.

<u>ಆದೇಶ ಸಂಖ್ಯೆ: ಕರಾಮುವಿ/ಆವಿ/ಸಿಬ್ಬಂದಿ-1/598/2019-20, ದಿನಾಂಕ: 07.11.2019</u>

ಮೇಲಿನ ಪ್ರಸ್ತಾವನೆಗೊಳಪಟ್ಟು ಹಾಗೂ ಮಾನ್ಯ ಕುಲಪತಿಗಳ ಆದೇಶದ ಮೇರೆಗೆ, ಡಾ. ಎಸ್. ನಿರಂಜನ್ ರಾಜ್, ಸಹಾಯಕ ಪ್ರಾಧ್ಯಾಪಕರು, ಮೈಕ್ರೋಬಯಾಲಜಿ ಅಧ್ಯಯನ ವಿಭಾಗ, ಕರಾಮುವಿ, ಇವರನ್ನು ವಿಶ್ವವಿದ್ಯಾನಿಲಯದ ಶಿಕ್ಷಣದ ಗುಣಮಟ್ಟವನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಸ್ಥಾಪಿಸಲ್ಪಟ್ಟಿರುವ ಆಂತರಿಕ ಗುಣಮಟ್ಟದ ಭರವಸೆ ಕೇಂದ್ರದ (CIQA) ನಿರ್ದೇಶಕರಾಗಿ ಮುಂದಿನ ಆದೇಶದವರೆಗೆ ನೇಮಕ ಮಾಡಿ ಆದೇಶಿಸಿದೆ.

ಸದರಿಯವರು ಕುಲಸಚಿವರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕಾರ್ಯಪ್ರವೃತ್ತರಾಗಲು ಸೂಚಿಸಿದೆ.

ಸದರಿಯವರು, UGC (Open and Distance Learning) Guidelines-2017 ರನ್ವಯ CIQA ಕೇಂದ್ರದ ಉದ್ದೇಶಗಳು ಹಾಗೂ ಜವಾಬ್ದಾರಿಗಳನ್ನು ನಿರ್ವಹಿಸಲು ಸೂಚಿಸಿದೆ.

ಆದೇಶದ ಮೇರೆಗೆ,

8/11/19

ಕುಲಸಚಿವ

ಗೆ,

ಡಾ. ಎಸ್. ನಿರಂಜನ್ ರಾಜ್, ಸಹಾಯಕ ಪ್ರಾಧ್ಯಾಪಕರು, ಮೈಕ್ರೋಬಯಾಲಜಿ ಅಧ್ಯಯನ ವಿಭಾಗ, ಕರಾಮುವಿ, ಮೈಸೂರು

ಪ್ರತಿ:

1. ಎಲ್ಲಾ ಶಾಸನಬದ್ಧ ಅಧಿಕಾರಿಗಳು, ಕರಾಮುವಿ, ಮೈಸೂರು.
2. ಡೀನ್(ಅಧ್ಯಯನ ಕೇಂದ್ರ), ಕರಾಮುವಿ, ಮೈಸೂರು.
3. ಅಧ್ಯಕ್ಷರು, ಮೈಕ್ರೋಬಯಾಯಲಜಿ ಅಧ್ಯಯನ ವಿಭಾಗ, ಕರಾಮುವಿ, ಮೈಸೂರು.
4. ವಿಶೇಷ ಕರ್ತವ್ಯಾಧಿಕಾರಿಗಳು, ಮಾನ್ಯಕುಲಪತಿಗಳ ಆಪ್ತ ಶಾಖೆ, ಕರಾಮುವಿ, ಮೈಸೂರು.
5. ಉಪಕುಲಸಚಿವರು(ಸಾಮಾನ್ಯ)/ಡೀನ್(ಶೈಕ್ಷಣಿಕ), ಕರಾಮುವಿ, ಮೈಸೂರು.
6. ಕುಲಸಚಿವರ ಆಪ್ತ ಸಹಾಯಕರು, ಕರಾಮುವಿ, ಮೈಸೂರು.
7. ಕಚೇರಿ ಪ್ರತಿ.